# Bangalore
# Regional News
# 25.01.2026 / 18.40hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಪದ್ಮಶ್ರೀ ಪ್ರಶಸ್ತಿ ಘೋಷಣೆ : ಕರ್ನಾಟಕದ ಮೂವರು ಸಾಧಕರು ಸೇರಿದಂತೆ 54 ಗಣ್ಯರಿಗೆ ಗೌರವ
2. ಪ್ರತಿ ಮತವೂ ಪ್ರಜಾಪ್ರಭುತ್ವದ ಅಡಿಪಾಯವನ್ನು ಬಲಪಡಿಸುತ್ತದೆ – ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
3. ರಾಜ್ಯದ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಯಾವುದೇ ರಾಜಿಯಿಲ್ಲ – ಗೃಹ ಸಚಿವ ಡಾ.ಜಿ.ಪರಮೇಶ್ವರ್
4. ಗದಗದಲ್ಲಿ ನೂತನ 'ನಮ್ಮ-ಕ್ಲಿನಿಕ್'ಗಳನ್ನು ಉದ್ಘಾಟಿಸಿದ ಸಚಿವ ಎಚ್.ಕೆ.ಪಾಟೀಲ್

*****************

ದೇಶದ ಅತ್ಯುನ್ನತ ನಾಗರಿಕ ಗೌರವಗಳಲ್ಲಿ ಒಂದಾದ ಪದ್ಮ ಪ್ರಶಸ್ತಿಗಳನ್ನು ಗಣರಾಜ್ಯೋತ್ಸವದ ಮುನ್ನಾದಿನವಾದ ಇಂದು ಘೋಷಿಸಲಾಗಿದ್ದು, ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಕೊಡುಗೆ ನೀಡಿದ 54 ಸಾಧಕರನ್ನು ಪದ್ಮಶ್ರೀ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಈ ವರ್ಷವೂ ಸಹ ಪ್ರಚಾರದ ಬೆಳಕಿಗೆ ಬಾರದೆ ಸದ್ದಿಲ್ಲದೆ ಸೇವೆ ಸಲ್ಲಿಸುತ್ತಿರುವ ತೆರೆಮರೆಯ ಸಾಧಕರಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ.

ಈ ಬಾರಿಯ ಪದ್ಮಶ್ರೀ ಪ್ರಶಸ್ತಿ ಪಟ್ಟಿಯಲ್ಲಿ ಕರ್ನಾಟಕದ ಮೂವರು ಗಣ್ಯರು ಸ್ಥಾನ ಪಡೆದಿದ್ದಾರೆ. ಸಾಹಿತ್ಯ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ಮಂಡ್ಯದ 'ಪುಸ್ತಕ ಪ್ರೇಮಿ' ಎಂದೇ ಖ್ಯಾತರಾದ ಅಂಕೇಗೌಡ ಅವರಿಗೆ ಪ್ರಶಸ್ತಿ ಒಲಿದುಬಂದಿದೆ. ಸಮಾಜ ಸೇವಾ ಕ್ಷೇತ್ರದಲ್ಲಿ ಎಸ್.ಜಿ. ಸುಶೀಲಮ್ಮ ಹಾಗೂ ವೈದ್ಯಕೀಯ ಕ್ಷೇತ್ರದಲ್ಲಿ ಸುರೇಶ್ ಹನಗವಾಡಿ ಅವರು ಪದ್ಮಶ್ರೀ ಗೌರವಕ್ಕೆ ಪಾತ್ರರಾಗಿದ್ದಾರೆ. ವೈದ್ಯಕೀಯ ಸವಾಲುಗಳನ್ನು ಮೆಟ್ಟಿ ನಿಂತು ಜನಸಾಮಾನ್ಯರಿಗೆ ನೆರವಾದ ಹನಗವಾಡಿ ಅವರ ಸಾಧನೆಯನ್ನು ಈ ಸಂದರ್ಭದಲ್ಲಿ ಗುರುತಿಸಲಾಗಿದೆ.

ದೇಶದ ಇತರ ಭಾಗಗಳ ಪ್ರಮುಖ ಸಾಧಕರ ಪಟ್ಟಿಯಲ್ಲಿ ಮಹಾರಾಷ್ಟ್ರದ ನವಜಾತ ಶಿಶು ತಜ್ಞೆ ಅರ್ಮಿದಾ ಫೆರ್ನಾಂಡಿಸ್ ಗಮನ ಸೆಳೆದಿದ್ದಾರೆ. ಇವರು ಭಾರತದ ಮೊದಲ ಮಾನವ ಹಾಲಿನ ಬ್ಯಾಂಕ್ ಸ್ಥಾಪಿಸಿದ ಕೀರ್ತಿಗೆ ಭಾಜನರಾಗಿದ್ದಾರೆ. ಉತ್ತರ ಪ್ರದೇಶದ ವೈದ್ಯ ಶ್ಯಾಮ್ ಸುಂದರ್, ತಮಿಳುನಾಡಿನ ಪಶು ವೈದ್ಯಕೀಯ ವಿಜ್ಞಾನಿ ಡಾ. ಪುನ್ನಿಯಮೂರ್ತಿ ನಟೇಸನ್ ಮತ್ತು ತೆಲಂಗಾಣದ ಸಂಶೋಧಕ ಡಾ. ಕುಮಾರಸ್ವಾಮಿ ತಂಗರಾಜ್ ಅವರು ಈ ಪಟ್ಟಿಯಲ್ಲಿದ್ದಾರೆ.

ಪರಿಸರ ಸಂರಕ್ಷಣೆಗಾಗಿ ಕೇರಳದ ಕೊಲ್ಲಕ್ಕೈಲ್ ದೇವಕಿ ಅಮ್ಮ ಮತ್ತು ಮಧ್ಯಪ್ರದೇಶದ ಮೋಹನ್ ನಗರ ಅವರಿಗೆ ಗೌರವ ಸಲ್ಲಿಸಲಾಗಿದೆ.

ಈ ಬಾರಿಯ ಪಟ್ಟಿಯಲ್ಲಿ ಪಶ್ಚಿಮ ಬಂಗಾಳದಿಂದ ಆರು, ತಮಿಳುನಾಡಿನಿಂದ ಐದು ಹಾಗೂ ಮಹಾರಾಷ್ಟ್ರ ಮತ್ತು ಉತ್ತರ ಪ್ರದೇಶದಿಂದ ತಲಾ ನಾಲ್ವರು ಸಾಧಕರು ಆಯ್ಕೆಯಾಗಿದ್ದಾರೆ. ತೀವ್ರ ವೈಯಕ್ತಿಕ ಸಂಕಷ್ಟ ಮತ್ತು ದುರಂತಗಳನ್ನು ಮೆಟ್ಟಿ ನಿಂತು ಸಮಾಜ ಸೇವೆಗೆ ತಮ್ಮನ್ನು ಸಮರ್ಪಿಸಿಕೊಂಡ ಸಾಧಕರಿಗೆ ಈ ಬಾರಿ ಮನ್ನಣೆ ದೊರೆತಿದೆ.

*****************

ಪ್ರತಿ ಮತವೂ ಪ್ರಜಾಪ್ರಭುತ್ವದ ಅಡಿಪಾಯವನ್ನು ಬಲಪಡಿಸುತ್ತದೆ. ಮತದಾನ ಪ್ರಜಾಪ್ರಭುತ್ವದೆಡೆಗೆ ನಾಗರಿಕರಿಗಿರುವ ಸಾಂವಿಧಾನಿಕ ಜವಾಬ್ದಾರಿಯಾಗಿದೆ ಎಂದು ಕರ್ನಾಟಕದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತಿಳಿಸಿದರು.

ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ 16ನೇ ರಾಷ್ಟ್ರೀಯ ಮತದಾರರ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಪ್ರತಿ ಮತವೂ ದೇಶದ ಪ್ರಗತಿ ಮತ್ತು ಭವಿಷ್ಯವನ್ನು ನಿರ್ಧರಿಸುವ ಶಕ್ತಿ ಹೊಂದಿದೆ ಎಂದು ಅಭಿಪ್ರಾಯಪಟ್ಟರು. ವಿಶೇಷವಾಗಿ ಯುವ ಮತದಾರರು ಯಾವುದೇ ಪ್ರಲೋಭನೆಗೆ ಒಳಗಾಗದೆ, ನೈತಿಕವಾಗಿ ಮತ ಚಲಾಯಿಸುವ ಮೂಲಕ ಸಕಾರಾತ್ಮಕ ಬದಲಾವಣೆಗೆ ಮುನ್ನುಡಿ ಬರೆಯಬೇಕು ಎಂದು ಅವರು ಕರೆ ನೀಡಿದರು.

ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಮಾತನಾಡಿ, ಯುವಜನರು ಮತ್ತು ಮಹಿಳೆಯರು ಮತದಾರರ ಪಟ್ಟಿಗೆ ಸೇರ್ಪಡೆಯಾಗಲು ಚುನಾವಣಾ ಆಯೋಗವು ವರ್ಷದಲ್ಲಿ ನಾಲ್ಕು ಬಾರಿ ಅವಕಾಶ ಕಲ್ಪಿಸಿದೆ ಎಂದು ತಿಳಿಸಿದರು. ಈ

ಸಂದರ್ಭದಲ್ಲಿ ಚುನಾವಣಾ ಕಾರ್ಯದಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿದ ಅಧಿಕಾರಿಗಳಿಗೆ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಹಲವು ಗಣ್ಯರು ಉಪಸ್ಥಿತರಿದ್ದು, ಸಾವಿರಕ್ಕೂ ಅಧಿಕ ಮಂದಿ ಮತದಾನದ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

*****************

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ಯಾವುದೇ ರಾಜಿ ಮಾಡಿಕೊಳ್ಳುವುದಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು, ರಾಜೀವ್ ಗೌಡ ಅವರ ಬಂಧನ ವಿಳಂಬವಾಗುತ್ತಿರುವ ಕುರಿತು ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರಕ್ಕೆ ಯಾರ ಮೇಲೂ ಮೃದು ಧೋರಣೆ ಇಲ್ಲ ಹಾಗೂ ಮೊದಲ ದಿನವೇ ಅವರನ್ನು ಬಂಧಿಸಲು ಕಠಿಣ ಸೂಚನೆ ನೀಡಲಾಗಿದೆ ಎಂದು ಸ್ಪಷ್ಟಪಡಿಸಿದರು. ಅವರು ಎಷ್ಟೇ ದಿನ ತಲೆಮರೆಸಿಕೊಂಡರೂ ಶೀಘ್ರದಲ್ಲೇ ಪೊಲೀಸರು ಅವರನ್ನು ಬಂಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಸಚಿವರು, ಈ ತನಿಖೆಯಲ್ಲಿ ಯಾವುದೇ ಬಾಹ್ಯ ಒತ್ತಡಗಳಿಗೆ ಮಣಿಯುವ ಪ್ರಶ್ನೆಯೇ ಇಲ್ಲ ಎಂದರು.

ಇದೇ ಸಂದರ್ಭದಲ್ಲಿ ಮಹಾರಾಷ್ಟ್ರದಲ್ಲಿ ಪತ್ತೆಯಾದ ಬೃಹತ್ ಮೊತ್ತದ ಹಣದ ಪ್ರಕರಣದ ಕುರಿತು ಮಾತನಾಡಿದ ಅವರು, ಈ ಬಗ್ಗೆ ಮಹಾರಾಷ್ಟ್ರ ಪೊಲೀಸರು ಪತ್ರ ಬರೆದು ತನಿಖೆಗೆ ಸಹಕಾರ ಕೋರಿದ್ದಾರೆ ಎಂದು ಮಾಹಿತಿ ನೀಡಿದರು. ಪ್ರಕರಣವು ಈಗಷ್ಟೇ ಪ್ರಾಥಮಿಕ ಹಂತದಲ್ಲಿದ್ದು, ಸಂಪೂರ್ಣ ವರದಿ ಬಂದ ನಂತರವಷ್ಟೇ ರಾಜ್ಯದ ನಂಟಿನ ಬಗ್ಗೆ ಹೆಚ್ಚಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಇನ್ನು ಗಣರಾಜ್ಯೋತ್ಸವದಂದು ರಾಜ್ಯಪಾಲರು ಮಾಡುವ ಭಾಷಣದ ಕುರಿತು ಪ್ರತಿಕ್ರಿಯಿಸಿದ ಸಚಿವರು, ಸರ್ಕಾರ ನೀಡಿದ ಭಾಷಣದ ಪ್ರತಿಯನ್ನು ರಾಜ್ಯಪಾಲರು ಹೇಗೆ ಪರಿಗಣಿಸುತ್ತಾರೆ ಎಂಬುದು ಇಂದು ಸ್ಪಷ್ಟವಾಗಲಿದೆ ಎಂದು ತಿಳಿಸಿದರು.

*****************

ಬಿಡದಿ ಟೌನ್‌ಶಿಪ್ ಯೋಜನೆ ಕುರಿತು ಚರ್ಚಿಸಲು ಸದಾ ಸಿದ್ಧರಿರುವುದಾಗಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಕನಕಪುರದ ದೊಡ್ಡ ಹಾಲಹಳ್ಳಿಯಲ್ಲಿ ನಿರ್ಮಾಣವಾಗಿರುವ ನೂತನ ರಾಮಮಂದಿರ ಉದ್ಘಾಟನಾ ಸಮಾರಂಭದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರೊಂದಿಗೆ ಬಿಡದಿ ಟೌನ್‌ಶಿಪ್ ಕುರಿತು ಚರ್ಚೆ ನಡೆಸಲು ಸಿದ್ಧವಿದ್ದು, ಮಾಧ್ಯಮಗಳೇ ದಿನಾಂಕ ನಿಗದಿಪಡಿಸಲಿ ಎಂದಿದ್ದಾರೆ.

ಕನಕಪುರ ಕ್ಷೇತ್ರದಲ್ಲಿ ಸುಮಾರು 500ಕ್ಕೂ ಹೆಚ್ಚು ದೇವಾಲಯಗಳ ನಿರ್ಮಾಣಕ್ಕೆ ನೆರವು ನೀಡಿರುವುದಾಗಿ ಹಾಗೂ ಪೂರ್ವಜರ ಆಸ್ತಿಗಳನ್ನು ಸಾರ್ವಜನಿಕ ಹಿತಕ್ಕಾಗಿ ಶಾಲೆ ಹಾಸ್ಟೆಲ್‌ಗಳಿಗೆ ದಾನ ಮಾಡಿರುವುದಾಗಿ ತಿಳಿಸಿದ ಅವರು, ಕಷ್ಟ ಕಾಲದಲ್ಲಿ ಕ್ಷೇತ್ರದ ಜನತೆ ತೋರಿದ ಪ್ರೀತಿ ಮತ್ತು ಪ್ರಾರ್ಥನೆಯೇ ತಮ್ಮ ಆಸ್ತಿ ಎಂದರು.

*****************

ಗದಗ ನಗರದ ಡೊರಗಲ್ಲಿ, ಕುರಹಟ್ಟಿ ಪೇಟೆ, ಹಮಾಲರ ಕಾಲೋನಿ ಹಾಗೂ ಆಶ್ರಯ ಕಾಲೊನಿಯಲ್ಲಿ ಸ್ಥಾಪಿಸಲಾದ ನೂತನ 'ನಮ್ಮ ಕ್ಲೀನಿಕ್'ಗಳನ್ನು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ್ ಇಂದು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒಂದು ವರ್ಷದ ಅವಧಿಯಲ್ಲಿ ಇಲ್ಲಿನ ಕುಟುಂಬಗಳ ಆರೋಗ್ಯದಲ್ಲಿ ಸ್ಪಷ್ಟ ಸುಧಾರಣೆ ಆಗಬೇಕು ಎಂಬುದು ನಮ್ಮ ಗುರಿಯಾಗಿದೆ. ಜನರ ಆರೋಗ್ಯದ ಕಾಳಜಿ ಈ 'ನಮ್ಮ ಕ್ಲಿನಿಕ್'ಗಳ ಮೂಲಕ ಸಾಧ್ಯವಾಗಲಿದೆ. ಜನಸಾಮಾನ್ಯರಿಗೆ ಮನೆಬಾಗಿಲಿನಲ್ಲೇ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

*****************

ರಾಜ್ಯದಲ್ಲಿ ಅಧಿಕಾರಕ್ಕೆ ಬಂದು ಎರಡೂವರೆ ವರ್ಷಗಳಾಗಿದ್ದರು ಕಾಂಗ್ರೆಸ್ ಸರ್ಕಾರ ಯಾವುದೇ ಅಭಿವೃದ್ಧಿ ಮಾಡದೇ ಆರ್ಥಿಕ ದಿವಾಳಿಯತ್ತ ರಾಜ್ಯವನ್ನು ತಳ್ಳುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬೆಲೆ ಏರಿಕೆಯ ಮೂಲಕ ಜನರು ಸಂಕಷ್ಟಕ್ಕೀಡಾಗಿದ್ದಾರೆ. ಸರ್ಕಾರ ಕೇವಲ ಅಲ್ಪ ಸಂಖ್ಯಾತರ ಓಲೈಕೆಯಲ್ಲಿ ತೊಡಗಿದೆ. ರಾಜ್ಯದಲ್ಲಿ ಸಾಂವಿಧಾನಿಕ ಹಕ್ಕುಗಳ ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ್ದಾರೆ.

*****************

ಪತ್ರಕರ್ತರು ಅಪ್ರಾಮಾಣಿಕರಾದರೆ ಸಮಾಜದಲ್ಲಿ ಅರಾಜಕತೆ ಸೃಷ್ಟಿಯಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಚಿತ್ತಾಪುರ ಪಟ್ಟಣದ ಬಜಾಜ್ ಕಲ್ಯಾಣ ಮಂಟಪದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಿರಿಯ ಪತ್ರಕರ್ತ ದಿ. ನಾಗಯ್ಯಸ್ವಾಮಿ ಅಲ್ಲೂರು ಅವರ ಕುರಿತಾದ ಸಂಗ್ರಹ ಗ್ರಂಥ ' ನಾಗಾವಿ ನಕ್ಷತ್ರ' ಬಿಡುಗಡೆಗೊಳಿಸಿ ಅವರು ಮಾತನಾಡಿದರು.

*****************

ಇಂದು ದೇಶಾದ್ಯಂತ ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಯಿತು. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಿಲ್ಲಾಡಳಿತಗಳು, ಸ್ಥಳೀಯ ಯುವಕರಲ್ಲಿ ಮತದನದ ಚುನಾವಣಾ ಪ್ರಕ್ರಿಯೆ ಹಾಗೂ ಪ್ರಜಾಪ್ರಭುತ್ವ ಮೌಲ್ಯದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದವು.

ಮಂಡ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕುಮಾರ, ದೇಶ ಚೆನ್ನಾಗಿರಬೇಕಾದರೆ ಸೂಕ್ತ ನಾಯಕರನ್ನು ಆಯ್ಕೆ ಮಾಡುವುದು ಮುಖ್ಯ ಎಂದು ತಿಳಿಸಿದ್ದಾರೆ.

ಯಾದಗಿರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಮರುಳಸಿದ್ಧಾರಾಧ್ಯ ಪಾಲ್ಗೊಂಡರು. ಈ ವೇಳೆ ಅವರು, ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಇನ್ನಷ್ಟು ಬಲಿಷ್ಠಗೊಳಿಸುವಲ್ಲಿ ಮತದಾನದ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಹೇಳಿದರು.

ಇದೇ ರೀತಿ ಬಾಗಲಕೋಟೆ, ಹಾಸನ ವಿಜಯಪುರ ಸೇರದಂತೆ ವಿವಿಧ ಜಿಲ್ಲೆಗಳಲ್ಲಿ ಜಿಲ್ಲಾ ಮಟ್ಟದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮಗಳು ನಡೆದವು.

*****************

ಉತ್ತರಕನ್ನಡ ಜಿಲ್ಲೆಯ ಕುಮಟಾದಲ್ಲಿ ಕೇಂದ್ರ ಸರ್ಕಾರದ ವಿಕಸಿತ ಭಾರತ ಉದ್ಯೋಗ ಖಾತರಿ ಮತ್ತು ಅಜೀವಿಕಾ ಮಿಷನ್ ಗ್ಯಾರಂಟಿ ವಿಕಸಿತ ಭಾರತ ಜಿ–ರಾಮ–ಜಿ ಯೋಜನೆಯ ಬಗ್ಗೆ ಜಿಲ್ಲಾಮಟ್ಟದ ಕಾರ್ಯಾಗಾರ ನಡೆಯಿತು.

********ಮುಕ್ತಾಯ********